ಶಾಲಾ ಪೀಠೋಪಕರಣಗಳ ಕುರಿತು

334(466) ಶ್ರೀ ಚಂದ್ರಕಾಂತ್ ಬೆಲ್ಲದ (ಧಾರವಾಡ) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) 1998-97ನೇ ಸಾಲಿನಲ್ಲಿ ಪ್ರತಿ ಕಿರಿಯ ಪ್ರಾಥಮಿಕ ಶಾಲೆಗಳಿಗೆ ಪೀಠೋಪಕರಣ ವಿಜ್ಞಾನ ಸಲಕರಣೆಗಳ ಚಾರ್ಟುಗಳು ಹಾಗೂ ಕ್ರೀಡಾ ಸಾಮಗ್ರಿಗಳನ್ನು ಕೊಳ್ಳಲು ಪ್ರತಿ ಶಾಲೆಗೆ ಎಷ್ಟರಂತೆ ಹಣವನ್ನು ಬಿಡುಗಡೆ ಮಾಡಲಾಗಿದೆ.

ಆ) ಈ ಖರೀದಿಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಇ) ಹಾಗಿದ್ದಲ್ಲಿ ಇದುವರೆಗೂ ಸರ್ಕಾರವು ಎಷ್ಟು ಜನ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

ಹೆಚ್.ಜಿ. ಗೋವಿಂದಗೌಡ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು.

ಅ) 1996-97ನೇ ಸಾಲಿನಲ್ಲಿ ರಾಜ್ಯವಲಯದ ವಿವಿಧ ಯೋಜನಾ ಕಾರ್ಯಕ್ರಮಗಳಡಿಯಲ್ಲಿ ರಾಜ್ಯದ 5000 ಹಿರಿಯ ಪ್ರಾಥಮಿಕ ಶಾಲೆಗಳಿಗೆ ಪ್ರತಿ ಶಾಲೆಗೆ ರೂ. 7,000 (ಏಳು ಸಾವಿರ ರೂಪಾಯಿಗಳು) ರಂತೆ ಕಲಿಕಾ ಬೋಧನಾ ಸಾಮಗ್ರಿ ಹಾಗೂ ಪೀಠೋಪಕರಣ ಸರಬರಾಜು ಮಾಡಲು ಒಟ್ಟು 350.00 ಲಕ್ಷಗಳನ್ನು ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲಾಗಿದೆ.

ಆ) ಈ ಖರೀದಿಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಈವರೆವಿಗೆ ಯಾವುದೇ ದೂರು ಬಂದಿರುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಜನಸಂಖ್ಯಾ ಆಧಾರದ ಮೇಲೆ ಶಾಲೆಗಳ ವಿವರದ ಕುರಿತು.

335(719) ಶ್ರೀ ಎಂ.ದಿವಾಕರ ಬಾಬು (ಬಳ್ಳಾರಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದ ಪ್ರತಿ ಜಿಲ್ಲೆಯ ಜನ ಸಂಖ್ಯೆ ಎಷ್ಟು?

ಆ) ಪ್ರತಿಯೊಂದು ಜಿಲ್ಲೆಗೂ ಎಷ್ಟೆಷ್ಟು ಶಾಲೆಗಳನ್ನು ಒದಗಿಸಲಾಗಿದೆ.

ಇ) ಅದರಲ್ಲಿ ಪ್ರಾಥಮಿಕ ಶಾಲೆಗಳೆಷ್ಟು? ಹಿರಿಯ ಪ್ರಾಥಮಿಕ ಶಾಲೆಗಳೆಷ್ಟು? ಹಾಗೂ ಪ್ರೌಢ ಶಾಲೆಗಳೆಷ್ಟು?

ಈ) ಪ್ರತಿ ಜಿಲ್ಲೆಯಲ್ಲಿ ಜನ ಸಂಖ್ಯೆ ಆಧಾರದ ಮೇಲೆ ಏನಾದರೂ ಶಾಲೆಗಳನ್ನು ಮಂಜೂರು ಮಾಡಲಾಗಿದೆಯೇ?